ಕರ್ನಾಟಕ ಸರ್ಕಾರ ಸಿ ಆರ್ ಪಿ ಸಿ 67

ಹೇಳಿಕೆ ಹಾಳೆ

(ಆರ್.ಪಿ.ಸಂಖ್ಯೆ **57**)

ನಮೂನೆ ಸಂಖ್ಯೆ 4

**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಸಿಂಧನೂರು.**

**ಸಿ.ಸಿ.ನಂ.1656/2023**

| | | | |
|---|---|---|---|
| **ಸಾಕ್ಷಿದಾರರ ಹೆಸರು** | **ಶಿವಕುಮಾರ್** | | |
| **ತಂದೆ:ಹೆಸರು** | **ಬೀರಪ್ಪ ಸಾಬ್** | **ಪಿಡಬ್ಲೂ:** | **4** |
| **ವಯಸ್ಸು:** | **28 ವರ್ಷ** | **ಸಿಡಬ್ಲೂ:** | **1** |
| **ಉದ್ಯೋಗ:** | **ವ್ಯವಸಾಯ** | | |
| **ವಾಸ ಸ್ಥಳ:** | **ಮಾರಲದಿನ್ನಿ ತಾಂಡಾ** | | |

**ದಿನಾಂಕ 20.11.2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ. ರವರಿಂದ::**

ಚಾಸ-1 ರವರ ಪರಿಚಯ ಇಲ್ಲ. ಆರೋಪಿಯ ಪರಿಚಯ ಇಲ್ಲ. ಈ ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲ. ನಾನು ಪೋಲೀಸರಿಗೆ ಯಾವುದೇ ಹೇಳಿಕೆ ಕೊಟ್ಟಿಲ್ಲ. ಪೋಲೀಸರು ಒಂದು ಬಿಳಿ ಹಾಳೆಯ ಮೇಲೆ ಸಹಿ ಪಡೆದಿರುತ್ತಾರೆ. ದೂರನ್ನು ನಿಪಿ-7 ಎಂದು, ಸಾಕ್ಷಿಯ ಸಹಿಯನ್ನು ನಿಪಿ-7 ಎ ಎಂದು ಗುರುತಿಸಲಾಯಿತು.

**(ಈ ಹಂತದಲ್ಲಿ ಮಾನ್ಯ ಸ.ಸ.ಅ ರವರು, ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿಯನ್ನು ಕೋರಿದ್ದು, ಅನುಮತಿಯನ್ನು ನೀಡಲಾಯಿತು.)**

**ಪಾಟೀ ಸವಾಲು:: ಮಾನ್ಯ ಸ ಸ ಅ ರವರಿಂದ:**

ದಿಃ 13-03-2023 ರಂದು ಬೆ.10-30 ಕ್ಕೆ ನಿಮ್ಮ ತಮ್ಮ ಕರೆ ಮಾಡಿ ತಿಳಿಸಿದ್ದೇನೆಂದರೆ, ಬೂತಲದಿನ್ನಿ ಕ್ಯಾಂಪ್ ಸಮೀಪ ವಾಹನದಲ್ಲಿ ಕೆಲಸದ ನಿಮಿತ್ತ ಸಿಂಧನೂರಿಗೆ ಹೋಗುತ್ತಿದ್ದಾಗ, ಸದರಿ ವಾಹನವನ್ನು 1 ನೇ ಆರೋಪಿ ಓಡಿಸುತ್ತಿದ್ದನು ಎಂದರೆ ಸರಿಯಲ್ಲ. ಆಗ ಆತ ರೈಸ್ ಮಿಲ್‌ನ ಹತ್ತಿರ ತನ್ನ ವಾಹನವನ್ನು ಅತೀವೇಗ & ಅಜಾಗರೂಕತೆಯಿಂದ ನಡೆಸಿಕೊಂಡು ಬಂದು, ರಸ್ತೆಯ ಬಲಗಡೆಗೆ ಹೋಗಿ, ರಸ್ತೆಯ ಬಲಗಡೆಯಲ್ಲಿ ನಿಧಾನವಾಗಿ ನಡೆಸಿಕೊಂಡು ಬರುತ್ತಿದ್ದ ಕೆ ಎ 36/ಇ ಸಿ 4350 ವಾಹನದ ಸವಾರನಿಗೆ ಡಿಕ್ಕಿ ಪಡಿಸಿ ಅಪಘಾತ ಪಡಿಸಿದ್ದರು ಎಂದರೆ ಸರಿಯಲ್ಲ. ಅದರಿಂದ ಲಕ್ಷ್ಮಣ ಹಿಂದಲೆಗೆ ತೀವ್ರ ತರವಾದ ರಕ್ತಗಾಯವಾಗಿದ್ದವು ಎಂದರೆ ಸರಿಯಲ್ಲ. ಆತನನ್ನು ಪ್ರಥಮ ಚಿಕಿತ್ಸೆಗಾಗಿ ಸಿ.ಸ. ಆಸ್ಪತ್ರೆಗೆ ಕರೆದುಕೊಂಡು ಹೋಗಿ, ಅಲ್ಲಿಂದ ಬಳ್ಳಾರಿಯ ವಿಮ್ಸ್‌ಗೆ ಕರೆದುಕೊಂಡು ಹೋಗುತ್ತಿದ್ದಾಗ ಸದರಿ ಆಸ್ಪತ್ರೆಯ ಗೇಟಿನಲ್ಲಿ ಮಧ್ಯಾಹ್ನ ಮೃತರಾಗಿದ್ದರು ಎಂದರೆ ಸರಿಯಲ್ಲ.

ಸದರಿ ವಿಚಾರವಾಗಿ ನಾನು ಹೇಳಿಕೆ ಕೊಟ್ಟಿದ್ದೆ ಎಂದರೆ ಸರಿಯಲ್ಲ. ಸಾಕ್ಷಿಯು ಅಲ್ಲಗಳೆದಿರುವುದರಿಂದ, ಸಾಕ್ಷಿಯು ಪೋಲೀಸರಿಗೆ ನೀಡಿದ ಹೇಳಿಕೆಯನ್ನು ನಿಪಿ-8 ಎಂದು ಗುರುತಿಸಲಾಯಿತು. ಆರೋಪಿತರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀಸವಾಲುಃ ಆರೋಪಿ ಪರ ವಕೀಲರಿಂದಃ ಇಲ್ಲ.**

**ಮರು ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಸಾಕ್ಷಿಯ ಹೇಳಿಕೆಯನ್ನು ಬೆರಳಚ್ಚು ಮಾಡಲಾಯಿತು.)

**ಓ ಹೇ ಕೇ ಸ ಇದೆ.**

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಸಿಂಧನೂರು.